## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 637(681)
2. ಮಾನ್ಯ ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸ ಬೇಕಾದ ದಿನಾಂಕ : 19.09.2022
4. ಉತ್ತರಿಸುವ ಸಚಿವರು : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನೆಫ್ರೋ ಯುರಾಲಜಿ ಸಂಸ್ಥೆ, ಬೆಂಗಳೂರು ಇದರ ಖಾಯಂ ನಿರ್ದೇಶಕರ ನೇಮಕಾತಿಗಾಗಿ ದಿನಾಂಕ:05.10.2021 ರಂದು ಅಧಿಸೂಚನೆ ಹೊರಡಿಸಿದ್ದು, ಪ್ರಕ್ರಿಯೆ ಯಾವ ಹಂತದಲ್ಲಿದೆ; | ನೆಫ್ರೋ ಯುರಾಲಜಿ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ನಿರ್ದೇಶಕರ ನೇಮಕಾತಿಗಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 10 ಎಂಎಸ್‌ಎಫ್ 2020, ದಿನಾಂಕ:05.10.2021 ರನ್ವಯ ಅರ್ಜಿಗಳನ್ನು ಆಹ್ವಾನಿಸಿದ್ದು, ಸ್ವೀಕೃತಗೊಂಡ ಅರ್ಜಿಗಳನ್ನು ಆಯ್ಕೆ ಸಮಿತಿ ಮತ್ತು ಆಡಳಿತ ಮಂಡಳಿಯ ಆಯ್ಕೆ ಮತ್ತು ಶಿಫಾರಸ್ಸಿಗಾಗಿ ಸಲ್ಲಿಸಲಾಗಿದೆ. |
| ಆ) | ಖಾಯಂ ನಿರ್ದೇಶಕರ ಹುದ್ದೆಯ ನೇಮಕಾತಿಗೆ ಇರುವ ಮಾನದಂಡನೆಗಳೇನು; | ನಿರ್ದೇಶಕರ ಹುದ್ದೆಯ ನೇಮಕಾತಿಗೆ ಸಂಸ್ಥೆಯ ಬೈಲಾ ಮತ್ತು ನೇಮಕಾತಿ ನಿಯಮಗಳನ್ವಯ ಇರುವ ಮಾನದಂಡಗಳು:<br>1. ಭಾರತೀಯ ವೈದ್ಯಕೀಯ ಪರಿಷತ್ತಿನಿಂದ ಮಾನ್ಯತೆ ಪಡೆದ ವಿಶ್ವ ವಿದ್ಯಾಲಯದಿಂದ ನೆಫ್ರೋಲಜಿ ಅಥವಾ ಯುರಾಲಜಿ ವಿಭಾಗದಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು.<br>2. ಸ್ನಾತಕೋತ್ತರ ಪದವಿಯನ್ನು ಪಡೆದ ಪ್ರಾಧ್ಯಾಪಕರು ಹಾಗೂ ಯಾವುದೇ ಇತರೇ ಸಮಾನ ಹುದ್ದೆಯಲ್ಲಿ 5 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುವುದು ಹಾಗೂ ನೆಫ್ರೋಲಾಜಿ ಅಥವಾ ಯುರಾಲಜಿ ವಿಭಾಗದಲ್ಲಿ ಕನಿಷ್ಠ 10 ವರ್ಷಗಳಿಂದ ಕಡಿಮೆ ಇಲ್ಲದ ಬೋಧನಾ ಅನುಭವವನ್ನು ಹೊಂದಿರಬೇಕು.<br>3. ಸದರಿ ನೇಮಕಾತಿಯಲ್ಲಿ ವಿಭಾಗದ ಮುಖ್ಯಸ್ಥರುಗಳಿಗೆ ಆದ್ಯತೆ ನೀಡಲಾಗುವುದು.<br>4. ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು 70 ವರ್ಷಗಳನ್ನು (ನ್ಯಾಯಾಲಯದ ವ್ಯಾಜ್ಯಗಳಿಗೆ ಒಳಪಟ್ಟಿದೆ) ಮೀರಿರಬಾರದು ಅಥವಾ ವಯೋನಿವೃತ್ತಿ ಹೊಂದಲು ಕನಿಷ್ಠ 02 ವರ್ಷಗಳ ಸೇವಾ ಅವಧಿ ಬಾಕಿ ಇರಬೇಕು |

| | | |
|---|---|---|
| | | 5. ನಿರ್ದೇಶಕರ ಆಯ್ಕೆಯನ್ನು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿ ಪ್ರಕಾರ ಹಾಗೂ ಸಂಸ್ಥೆಯ ಬೈಲಾ ರೀತ್ಯಾ ಮಾಡಲಾಗುವುದು. |
| ಇ) | ಖಾಯಂ ನಿರ್ದೇಶಕರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಮಾನ್ಯ ಘನ ನ್ಯಾಯಾಲಯದಿಂದ ನಿರ್ದೇಶನ/ ಆದೇಶ/ತಡೆಯಾಜ್ಞೆ ಇದೆಯೇ; ಇದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಖಾಯಂ ನಿರ್ದೇಶಕರ ನೇಮಕಾತಿಗೆ ಹೊರಡಿಸಿದ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 10 ಎಂಎಸ್‌ಎಫ್ 2020, ದಿನಾಂಕ:05.10.2021ರ ವಿರುದ್ಧ ಘನ ನ್ಯಾಯಾಲಯದಲ್ಲಿ ಯಾವುದೇ ರೀತಿಯ ತಡೆಯಾಜ್ಞೆ ಇರುವುದಿಲ್ಲ.<br><br>ಡಾ|| ಆರ್. ಕೇಶವಮೂರ್ತಿಯವರು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 18902/2021 ಅನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಸದರಿ ಪ್ರಕರಣದಲ್ಲಿ ದಿನಾಂಕ:22.10.2021ರಂದು ನೀಡಿದ ಆದೇಶದಲ್ಲಿ ನಿರ್ದೇಶಕರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಆಕುಕ 10 ಎಂಎಸ್‌ಎಫ್ 2020, ದಿ:05.10.2021ರಂತೆ ಮುಂದುವರೆಯುವಂತೆ ಹಾಗೂ ಅಂತಿಮ ನಿರ್ಣಯವನ್ನು ನ್ಯಾಯಾಲಯದ ಗಮನಕ್ಕೆ ತರಲು ಸೂಚಿಸಿರುತ್ತದೆ.<br><br>ಆಯ್ಕೆ ಸಮಿತಿ ಮತ್ತು ಆಡಳಿತ ಮಂಡಳಿಯ ನಿರ್ಣಯ ಮತ್ತು ಶಿಫಾರಸ್ಸಿನ ಮೇರೆಗೆ ಅಂತಿಮ ಆದೇಶ ಹೊರಡಿಸುವ ಮುನ್ನ ನ್ಯಾಯಾಲಯದ ಗಮನಕ್ಕೆ ತಂದು ಮುಂದಿನ ಕ್ರಮವಹಿಸಲಾಗುವುದು. |

ಸಂಖ್ಯೆ: ಎಂಇಡಿ 365 ಎಂಎಸ್‌ಎಫ್ 2022

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು